ಅನಧಿಕೃತ ಮದ್ಯದ ಅಂಗಡಿಯ ವಿರುದ್ಧ ಕ್ರಮ

533 (486) ಶ್ರೀ ಶಿವಶಂಕರ್ ರೆಡ್ಡಿ ಎನ್.ಹೆಚ್ (ಗೌರಿಬಿದನೂರು) : ಮಾನ್ಯ ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಹಳ್ಳಿಗೆ 3–4 ಮದ್ಯದ ಅಂಗಡಿಗಳು ಅನಧಿಕೃತವಾಗಿ ನಡೆಯುತ್ತಿದ್ದು, ಇದರ ಬಗ್ಗೆ ಕ್ರಮ ಜರುಗಿಸಲು ಮನವಿ ಮಾಡಿದ್ದರೂ ಯಾವುದೇ ಕ್ರಮ ತೆಗೆದುಕೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಅಧಿಕಾರಿಗಳ ಹಾಗೂ ಅನಧಿಕೃತ ಮದ್ಯದ ಅಂಗಡಿಗಳ ವಿರುದ್ಧ ಸರ್ಕಾರ ಕೈಗೊಳ್ಳುವ ಕ್ರಮವೇನು?

ಶ್ರೀ ಎಂ.ಪಿ. ರೇಣುಕಾಚಾರ್ಯ (ಅಬಕಾರಿ ಸಚಿವರು) :

ಅ) ಅನಧಿಕೃತ ಮದ್ಯದಂಗಡಿಗಳು ಅಸ್ತಿತ್ವದಲ್ಲಿರುವುದು ಗಮನಕ್ಕೆ ಬಂದಿರುವುದಿಲ್ಲ. ಆದರೆ, ಅನಧಿಕೃತವಾಗಿ ಮದ್ಯ ಮಾರಾಟ ಮಾಡುತ್ತಿರುವುದು ಗಮನಕ್ಕೆ ಬಂದಿದ್ದು, ನಿಯಂತ್ರಣಕ್ಕೆ ಇಲಾಖಾ ವತಿಯಿಂದ ಎಲ್ಲಾ ತರವಾದ ಕಾನೂನು ಕ್ರಮ ಜರುಗಿಸಲಾಗುತ್ತಿದೆ.

ಆ) ಅಕ್ರಮ/ಅನಧಿಕೃತವಾಗಿ ಮದ್ಯವನ್ನು ಸಾಗಾಣಿಕೆ ಸಂಗ್ರಹ ಹಾಗೂ ಮಾರಾಟ ಮಾಡುವುದನ್ನು ತಡೆಗಟ್ಟುವಂತೆ ಅಧಿಕಾರಿಗಳಿಗೆ ಸುತ್ತೋಲೆ/ಪತ್ರಗಳ ಮೂಲಕ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿರುತ್ತದೆ. ಅಕ್ರಮ/ಅನಧಿಕೃತವಾಗಿ ಮದ್ಯವನ್ನು ಸಾಗಾಣಿಕೆ ಸಂಗ್ರಹ ಹಾಗೂ ಮಾರಾಟ ಪ್ರಕರಣಗಳನ್ನು ತಡೆಗಟ್ಟಲು ಸಾರ್ವಜನಿಕರಿಗೆ ಕಳ್ಳಭಟ್ಟಿ ಹಾಗೂ ನಕಲಿ ಮದ್ಯ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜನ ಜಾಗೃತಿ ಮೂಡಿಸಲಾಗಿರುತ್ತದೆ. ಜಾರಿ ಸಿಬ್ಬಂದಿ ಗ್ರಾಮ ಸಭೆಗಳನ್ನು ನಡೆಸುತ್ತಿದ್ದು, ಸದರಿ ಸಭೆಗಳಲ್ಲಿ ಸ್ತ್ರೀ ಶಕ್ತಿ ಸಂಘಗಳು, ಗ್ರಾಮ ಪಂಚಾಯ್ತಿ ಹಾಗೂ ಕಂದಾಯ ಅಧಿಕಾರಿಗಳಿಗೆ ಜಮೀನು/ಕಟ್ಟಡಗಳ ಮಾಲೀಕರುಗಳಿಗೆ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 1965 ರ ನಿಯಮ 50 ರಂತೆ ಮಾಹಿತಿ ನೀಡಲು ಕೋರಲಾಗಿದೆ.

ಗೌರಿಬಿದನೂರು ತಾಲ್ಲೂಕಿನಲ್ಲಿ ದಿನಾಂಕ: 01–01–2010 ರಿಂದ 28–02–2011 ರವರೆಗೆ 43 ಮೊಕದ್ದಮೆಗಳನ್ನು ದಾಖಲಿಸಿ, 27 ಆರೋಪಿಗಳನ್ನು ದಸ್ತಗಿರಿಮಾಡಿ, 76.690 ಲೀ ಮದ್ಯ, 9.780 ಲೀ ಬೀರ್ 122 ಲೀ ಸೇಂದಿ, 12 ಲೀ ಕಳ್ಳಭಟ್ಟಿ ಸಾರಾಯಿ ವಶಪಡಿಸಿಕೊಂಡು 10 ವಿವಿಧ ಬಗೆಯ ವಾಹನಗಳನ್ನು ಜಪ್ತಿಪಡಿಸಲಾಗಿರುತ್ತದೆ.

ಕಾಲೇಜು ಕೊಠಡಿಗಳ ನಿರ್ಮಾಣ

534 (487) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್ (ಗೌರಿಬಿದನೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಪ್ರಥಮ ದರ್ಜೆ ಕಾಲೇಜು ಮಂಜೂರಾಗಿ ಕಟ್ಟಡ ನಿರ್ಮಾಣವಾಗುತ್ತಿರುವುದು ನಿಜವೇ; ಕೇವಲ ನಾಲ್ಕು ಕೊಠಡಿಗಳು ನಿರ್ಮಾಣವಾಗುತ್ತಿದ್ದು, ಈಗಿನ ಎಲ್ಲಾ ಪದವಿ ಕೋರ್ಸುಗಳನ್ನು ನಡೆಸಲು ವಿದ್ಯಾರ್ಥಿಗಳಿಗೆ ಸ್ಥಳಾವಕಾಶ ನಡೆಸಲು ಆಗದೇ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಪದವಿಯ ಎಲ್ಲಾ ಕೋರ್ಸುಗಳನ್ನು ನಡೆಸಲು ಹೆಚ್ಚಿನ ಕೊಠಡಿಗಳನ್ನು ನಿರ್ಮಿಸುವ ಸಲುವಾಗಿ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು?

ಡಾ॥ ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು ಬಂದಿದೆ.

ಆ) ಅನುದಾನದ ಲಭ್ಯತೆಯನುಸಾರ ಹಂತ ಹಂತವಾಗಿ ಬಿಡುಗಡೆ ಮಾಡಲಾಗುವುದು.

ನರ್ಮ್ ಯೋಜನೆಯ ಅಡಿಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಮಂಜೂರಾದ ಅನುದಾನ

535 (488) ಶ್ರೀ ಶಿವಶಂಕರ್ ರೆಡ್ಡಿ ಎನ್.ಹೆಚ್ (ಗೌರಿಬಿದನೂರು) : ಮಾನ್ಯ ನಗರಾಭಿವೃದ್ಧಿ, ಕಾನೂನು ಹಾಗೂ ಸಂಸದೀಯ ವ್ಯವಹಾರಗಳು, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?